# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಟಿ.ಎ. ಶರವಣ |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1376 |
| ಉತ್ತರಿಸಬೇಕಾದ ದಿನಾಂಕ | : | 18/03/2020 |
| ಉತ್ತರಿಸಬೇಕಾದ ಸಚಿವರು | : | ಶ್ರೀ ವಿ. ಸೋಮಣ್ಣ, ವಸತಿ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿನ ಬಡವರಿಗಾಗಿ ಸೂರು ಕಲ್ಪಿಸಲು ಯಾವ ಯಾವ ವಸತಿ ಯೋಜನೆಗಳು ಪ್ರಸ್ತುತ ಜಾರಿಯಲ್ಲಿವೆ; | ರಾಜ್ಯದಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿನ ಬಡವರಿಗಾಗಿ ಸೂರು ಕಲ್ಪಿಸಲು ರಾಜೀವ್ ಗಾಂಧಿ ವಸತಿ ನಿಗಮದಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>**ರಾಜ್ಯ ಸರ್ಕಾರದ ಯೋಜನೆಗಳು:**<br>➢ ಬಸವ ವಸತಿ ಯೋಜನೆ<br>➢ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ (ಗ್ರಾಮೀಣ ಮತ್ತು ನಗರ)<br>➢ ವಾಜಪೇಯಿ ನಗರ ವಸತಿ ಯೋಜನೆ<br>➢ ಮುಖ್ಯಮಂತ್ರಿಗಳ ಒಂದು ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ<br>➢ ದೇವರಾಜ್ ಅರಸು ವಸತಿ ಯೋಜನೆ (ಗ್ರಾಮೀಣ ಮತ್ತು ನಗರ)<br>**ಕೇಂದ್ರ ಪುರಸ್ಕೃತ ಯೋಜನೆಗಳು:**<br>➢ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)<br>➢ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ). |
| (ಆ) | ಕಳೆದ 05 ವರ್ಷಗಳಲ್ಲಿ ಸದರಿ ಯೋಜನೆಗಳಡಿಯಲ್ಲಿ ಹಂಚಿಕೆ ಮಾಡಲಾದ ಗುರಿಯ ಪ್ರಮಾಣ ಎಷ್ಟು; ಮತ್ತು ಅದಕ್ಕೆ ಎದುರಾಗಿ ಸಾಧಿಸಲಾದ ಪ್ರಗತಿಯ ಪ್ರಮಾಣ ಎಷ್ಟು; | ಕಳೆದ 05 ವರ್ಷಗಳಲ್ಲಿ ಅಂದರೆ 2014-2015 ರಿಂದ 2018-2019ರವರೆಗೆ ಕೇಂದ್ರ ಪುರಸ್ಕೃತ ಯೋಜನೆಯೂ ಸೇರಿದಂತೆ, ವಿವಿಧ ವಸತಿ ಯೋಜನೆಗಳಡಿ ಒಟ್ಟು 19,42,024 ಮನೆಗಳ ಗುರಿಯನ್ನು ಹಂಚಿಕೆ ಮಾಡಲಾಗಿದ್ದು 17,06,440 ಫಲಾನುಭವಿಗಳನ್ನು ಆಯ್ಕೆಗೊಳಿಸಲಾಗಿದೆ. ಈ ಪೈಕಿ 9,68,672 ಮನೆಗಳು ಪೂರ್ಣಗೊಂಡಿದ್ದು 4,25,082 ಮನೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತವೆ. 2,75,778 ಮನೆಗಳು ಪ್ರಾರಂಭಗೊಳ್ಳಬೇಕಿದ್ದು, ಇನ್ನುಳಿದ 36,908 ಮನೆಗಳು ವಿವಿಧ ಕಾರಣಗಳಿಂದ ಬ್ಲಾಕ್ ಆಗಿರುತ್ತದೆ. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಇ)</td><td>ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿನ ಫಲಾನುಭವಿಗಳಿಗೆ ನೀಡಲಾಗುತ್ತಿರುವ ಸಹಾಯಧನದ ಮೊತ್ತ ಎಷ್ಟು; ಹಾಗೂ ಈ ಸಹಾಯಧನವನ್ನು ಯಾವ ಮಾನದಂಡದ ಆಧಾರದ ಮೇಲೆ ನೀಡಲಾಗುತ್ತಿದೆ;</td><td>ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿನ ಪ್ರತಿ ಫಲಾನುಭವಿಗೆ ವಿವಿಧ ವಸತಿ ಯೋಜನೆಗಳಡಿಯಲ್ಲಿ ನೀಡಲಾಗುತ್ತಿರುವ ಸಹಾಯಧನದ ವಿವರ ಕೆಳಗಿನಂತಿದೆ :<br>(ರೂ.ಗಳಲ್ಲಿ)
<table>
<tr><th rowspan="2">ಯೋಜನೆ</th><th colspan="2">ಪ್ರವರ್ಗ</th></tr>
<tr><th>ಸಾಮಾನ್ಯ</th><th>ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ</th></tr>
<tr><td>ಬಸವ ವಸತಿ ಯೋಜನೆ</td><td>120000</td><td>-</td></tr>
<tr><td>ಡಾ.ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ (ಗ್ರಾ)</td><td>-</td><td>175000</td></tr>
<tr><td>ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)</td><td>1,20,000</td><td>1,50,000</td></tr>
<tr><td>ದೇವರಾಜ ಅರಸು ವಸತಿ ಯೋಜನೆ</td><td>1,20,000</td><td>1,50,000</td></tr>
<tr><td>ವಾಜಪೇಯಿ ನಗರ ವಸತಿ ಯೋಜನೆ (1,20,000) + ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) (1,50,000) ಸಂಯೋಜನೆಯೊಂದಿಗೆ</td><td>2,70,000</td><td>-</td></tr>
<tr><td>ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ (ನಗರ) (2,00,000) + ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) (1,50,000) ಸಂಯೋಜನೆಯೊಂದಿಗೆ</td><td>-</td><td>3,50,000</td></tr>
<tr><td>ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ)</td><td>1,50,000</td><td>1,50,000</td></tr>
</table>
ಮಾನದಂಡಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ.<br><br>ಸಹಾಯಧನವನ್ನು ಜಿಪಿಎಸ್ ಆಧಾರಿತ ಮನೆಗಳ ಭೌತಿಕ ಪ್ರಗತಿಯ ಛಾಯಾಚಿತ್ರಗಳ ಆಧಾರದ ಮೇರೆಗೆ ಅರ್ಹಗೊಂಡ ಫಲಾನುಭವಿಗಳ ಖಾತೆಗೆ ನೇರವಾಗಿ ಅನುದಾನ ಬಿಡುಗಡೆ ಮಾಡಲಾಗುತ್ತದೆ.</td></tr>
<tr><td>(ಈ)</td><td>ಮನೆ ಕಾಮಗಾರಿ ಆರಂಭವಾದ ಎಷ್ಟು ದಿನಗಳೊಳಗಾಗಿ ಪೂರ್ಣಗೊಳ್ಳಬೇಕು ಅದರನುಸಾರವಾಗಿ ಸಹಾಯಧನವನ್ನು ಫಲಾನುಭವಿಗಳಿಗೆ ತಲುಪಿಸಲಾಗುತ್ತಿದೆಯೆ;</td><td>"ಮನೆ" ಮಾರ್ಗಸೂಚಿಯ ಪ್ರಕಾರ ಫಲಾನುಭವಿಯು ನಿಗಮದಿಂದ ಅನುಮೋದನೆಗೊಂಡು ಕಾಮಗಾರಿ ಆದೇಶ ಪತ್ರ ಪಡೆದ ಮೂರು ತಿಂಗಳೊಳಗಾಗಿ ಮನೆ ನಿರ್ಮಾಣ ಪ್ರಾರಂಭ ಮಾಡಬೇಕಿರುತ್ತದೆ ಹಾಗೂ ಕಾಮಗಾರಿಯನ್ನು ಒಂದು ವರ್ಷದೊಳಗೆ ಪೂರ್ಣಗೊಳಿಸಬೇಕಿರುತ್ತದೆ.<br><br>ಫಲಾನುಭವಿಗಳ ಮನೆ ನಿರ್ಮಾಣದ ತಳಪಾಯ, ಕಿಟಕಿ, ಛಾವಣಿ ಹಾಗೂ ಪೂರ್ಣ ಹಂತದ ಜಿ.ಪಿ.ಎಸ್ ಛಾಯಚಿತ್ರಗಳ ಆಧಾರದ ಮೇಲೆ ನಾಲ್ಕು ಕಂತುಗಳಲ್ಲಿ ಫಲಾನುಭವಿಗಳ ಆಧಾರ್ ಆಧಾರಿತ ಬ್ಯಾಂಕ್ ಖಾತೆಗೆ ನೇರವಾಗಿ ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದೆ.</td></tr>
</table>

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಉ) | ನಕಲಿ ಫಲಾನುಭವಿಗಳನ್ನು ಪತ್ತೆ ಹಚ್ಚಲು ಪರಿಶೀಲನೆ ನಡೆಸಲಾಗುತ್ತಿರುವ ನೆಪದಲ್ಲಿ ಅರ್ಹ ಫಲಾನುಭವಿಗಳು ಸಹಾಯಧನ ಪಡಯುವಲ್ಲಿ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದರೆ ಅದರ ನಿವಾರಣೆಗೆ ಅನುಸರಿಸಿದ ಕ್ರಮಗಳೇನು? | ವಿವಿಧ ವಸತಿ ಯೋಜನೆಗಳಡಿ ಜುಲೈ 2019ರವರೆಗೆ ಜಿ.ಪಿ.ಎಸ್ ಭೌತಿಕ ಪ್ರಗತಿಗನುಗುಣವಾಗಿ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. ಆದರೆ, ವಿವಿಧ ವಸತಿ ಯೋಜನೆಗಳಡಿ ಅನುದಾನ ದುರ್ಬಳಕೆಯನ್ನು ತಡೆಹಿಡಿಯುವ ಉದ್ದೇಶದಿಂದ ದಿನಾಂಕ:16.11.2019ರ ಸರ್ಕಾರಿ ಆದೇಶದ ರೀತ್ಯಾ ಪ್ರಗತಿಯಲ್ಲಿರುವ ಹಾಗೂ ಅನುದಾನ ಬಿಡುಗಡೆಗೆ ಬೇಡಿಕೆ ಇರುವ ಮನೆಗಳನ್ನು Geo ಆಧಾರಿತ "Vigil App" ಮೂಲಕ ಪರಿಶೀಲಿಸಲು ಗ್ರಾಮೀಣ ಪ್ರದೇಶದಲ್ಲಿ ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಹಣಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಹಾಗೂ ನಗರ ಪ್ರದೇಶದಲ್ಲಿ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಪರಿಶೀಲನಾ ಸಮಿತಿ ರಚಿಸಲಾಗಿರುತ್ತದೆ.<br><br>ಅದರಂತೆ, 2,23,729 ಮನೆಗಳನ್ನು ವಿಜಿಲ್ ಆಪ್ ಮೂಲಕ ಪರಿಶೀಲಿಸಲು ಜಿಲ್ಲಾಧಿಕಾರಿಗಳಿಗೆ ಮತ್ತು ಮುಖ್ಯ ಕಾರ್ಯನಿರ್ವಾಹಕರಿಗೆ ನೀಡಿದ್ದು, ಜಿಲ್ಲಾಧಿಕಾರಿಗಳು ಮತ್ತು ಮುಖ್ಯ ಕಾರ್ಯನಿರ್ವಾಹಕ ವರದಿ ಆಧಾರದ ಮೇಲೆ 39,733 ಫಲಾನುಭವಿಗಳಿಗೆ ಒಟ್ಟು ರೂ 183.72 ಕೋಟಿ ಬಿಡುಗಡೆ ಮಾಡಲಾಗಿದೆ. ಇನ್ನೂ 1,83,996 ಫಲಾನುಭವಿಗಳ ಮನೆಗಳ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದ್ದು, ಈ ಮನೆಗಳಿಗೆ ಸುಮಾರು ರೂ 845.27 ಕೋಟಿ ಬಿಡುಗಡೆ ಮಾಡಬೇಕಾಗಿರುವುದು ಬಾಕಿ ಉಳಿದಿದ್ದು, ಪರಿವೀಕ್ಷಣಾ ವರದಿಯನ್ನು ಪರಿಶೀಲಿಸಿ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡಲಾಗುವುದು. |

**ವಇ 116 ಹೆಚ್‌ಎಎಂ 2020**

(ವಿ. ಸೋಮಣ್ಣ)
ವಸತಿ ಸಚಿವರು.

## ಅನುಬಂಧ

### ವಿವಿಧ ವಸತಿ ಯೋಜನೆಯಡಿಯಲ್ಲಿ ಫಲಾನುಭವಿಗಳ ಆಯ್ಕೆಗೆ ಸರ್ಕಾರವು ನಿಗದಿಪಡಿಸಿರುವ ಅರ್ಹತೆ ಮತ್ತು ಮಾನದಂಡಗಳು:

- ಅರ್ಜಿದಾರರು ಕಡ್ಡಾಯವಾಗಿ ಮಹಿಳೆಯಾಗಿರಬೇಕು (ವಿವಾಹಿತ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿ). ಮಾಜಿ ಯೋಧರು, ವಿಧುರರು, ಅಂಗವಿಕಲರು ಮತ್ತು ಹಿರಿಯ ನಾಗರೀಕರಾಗಿದ್ದಲ್ಲಿ ಪುರುಷರು ಸಹಾ ಅರ್ಹರಾಗಿರುತ್ತಾರೆ.

- 2018ನೇ ಸಾಲಿನ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಗುರುತಿಸಲಾದ ವಸತಿ ರಹಿತರ ಸಮೀಕ್ಷೆಯ ಪಟ್ಟಿಯಲ್ಲಿದ್ದು, ಸ್ವಂತ ನಿವೇಶನ ಹೊಂದಿರಬೇಕು.

- ಅರ್ಜಿದಾರರ ಕುಂಟುಂಬವು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿದ್ದು, ವಾರ್ಷಿಕ ಆದಾಯವು ಗ್ರಾಮೀಣ ಪ್ರದೇಶದವರಾಗಿದಲ್ಲಿ ರೂ. 32000/- ಕ್ಕಿಂತ ಕಡಿಮೆ ಇರಬೇಕು.

- ಅರ್ಜಿದಾರರ ಕುಟುಂಬವು ವಸತಿರಹಿತರಾಗಿದ್ದು, ಅರ್ಜಿದಾರರು ಅಥವಾ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಕರ್ನಾಟಕದ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು. ಶಿಥಿಲಗೊಂಡ ಮನೆ ಅಥವಾ ಗುಡಿಸಲಿನಲ್ಲಿ ವಾಸಿಸುತ್ತಿರುವವರು ಅರ್ಹರಾಗಿರುತ್ತಾರೆ.

- ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು (ಪಾರಂಪರಿಕ ಅರಣ್ಯ ಹಕ್ಕುಗಳ ಕಾಯ್ದೆಯನ್ವಯ ಜಿಲ್ಲಾ ಸಮಿತಿಯಿಂದ ನೀಡಲಾದ ಹಕ್ಕುಪತ್ರ ಪಡೆದಿದ್ದಲ್ಲಿ ವಸತಿ ಸೌಕರ್ಯ ಪಡೆಯಲು ಪರಿಗಣಿಸಬಹುದಾಗಿದೆ.)

- ಬೇರೆ ಯಾವುದೇ ಯೋಜನೆ/ ಇಲಾಖೆಯಿಂದ ಈಗಾಗಲೇ ವಸತಿ ಸೌಲಭ್ಯ ಪಡೆದಿರಬಾರದು.

- ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾ)ಯಡಿ ವಸತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದಿಂದ ನೀಡಲಾದ ಸಾಮಾಜಿಕ ಆರ್ಥಿಕ ಮತ್ತು ಜಾತಿ ಜನಗಣತಿ 2011ರ ಪಟ್ಟಿಯಲ್ಲಿ ಹೆಸರು ಸೇರಿರಬೇಕು.

- ಡಾ.ಬಿ.ಆರ್.ಅಂಬೇಡ್ಕರ್ ವಸತಿ ಯೋಜನೆಯಡಿ ವಸತಿ ಸೌಲಭ್ಯ ಪಡೆಯಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗಕ್ಕೆ ಸೇರಿದವರಾಗಿರಬೇಕು. ಈ ವರ್ಗದ ವಸತಿ ರಹಿತರಿಗೆ ಬೇಡಿಕೆ ಆಧಾರಿತವಾಗಿ ವಸತಿ ಕಲ್ಪಿಸಲಾಗುವುದು. (2017-18)